ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 02-05-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಪತ್ರಿಕಾ ಗೋಷ್ಠಿ:<br>ಶ್ರೀ ಬಿ. ಎಲ್. ಶಂಕರ್,<br>ಕರ್ನಾಟಕ ಚಿತ್ರಕಲಾ ಪರಿಷತ್ ಅಧ್ಯಕ್ಷರು | 3-5-2016<br>ಮಂಗಳವಾರ<br>ಅಪರಾಹ್ನ 12-00 ಗಂಟೆಗೆ | ಚಿತ್ರಕಲಾ ಪರಿಷತ್‌ನ ಕೆಳಮಹಡಿ,<br>ಕರ್ನಾಟಕ ಚಿತ್ರಕಲಾ ಪರಿಷತ್ತು<br>ಆರ್ಟ್ ಕಾಂಪ್ಲೆಕ್ಸ್,<br>ಕುಮಾರಕೃಪಾ ರಸ್ತೆ<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ವಿಧಾನಸೌಧ – ವಿಕಾಸಸೌಧ ಕಟ್ಟಡಗಳಲ್ಲಿ ಶುಚಿತ್ವಕ್ಕೆ ಮುಖ್ಯ ಕಾರ್ಯದರ್ಶಿಗಳ ಕರೆ.

ಬೆಂಗಳೂರು, ಮೇ 2 (ಕರ್ನಾಟಕ ವಾರ್ತೆ)

ರಾಜ್ಯದ ಮುಖ್ಯ ಕಾರ್ಯದರ್ಶಿ ***ಶ್ರೀ ಅರವಿಂದ ಜಾಧವ್*** ಅವರು ಇಂದು ವಿಧಾನಸೌಧ ಮತ್ತು ವಿಕಾಸಸೌಧಕ್ಕೆ ಅನಿರೀಕ್ಷಿತ ಭೇಟಿ ನೀಡಿ ಅಲ್ಲಿನ ಮೂಲಸೌಕರ್ಯಗಳ ಪರಿಶೀಲನೆ ನಡೆಸಿದರು. ಅನಿರೀಕ್ಷಿತ ಭೇಟಿಯ ನಂತರ ವಿಧಾನಸೌಧ ಮತ್ತು ವಿಕಾಸಸೌಧದ ಆವರಣದಲ್ಲಿ **"ಕರ್ನಾಟಕ ದರ್ಶನದ ಮ್ಯೂಸಿಯಂ"** ಸ್ಥಾಪಿಸುವ ಕುರಿತಂತೆ ಸಭೆ ನಡೆಸಿದ ಮುಖ್ಯ ಕಾರ್ಯದರ್ಶಿಗಳು ಮೇಲ್ಕಂಡ ಕಟ್ಟಡಗಳಲ್ಲಿ ಕೈಗೊಂಡಿರುವ ಶುಚಿತ್ವ ಮತ್ತು ಸುರಕ್ಷತೆಗಳು ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿರುವ ಬಗ್ಗೆ ಅತೃಪ್ತಿ ವ್ಯಕ್ತಪಡಿಸಿ, ಮೇಲ್ಕಂಡ ಕಟ್ಟಡಗಳಲ್ಲಿರುವ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಹಾಗೂ ಕಟ್ಟಡದ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಡಲು ಅಗತ್ಯ ಯೋಜನೆಗಳನ್ನು ರೂಪಿಸಲು ಸೂಚನೆ ನೀಡಿದರು. ಈ ಕಟ್ಟಡಗಳಲ್ಲಿನ

ಸುರಕ್ಷತೆಯನ್ನು ಗಮನದಲ್ಲಿರಿಸಿಕೊಂಡು ಸಾರ್ವಜನಿಕ ಪ್ರವೇಶ ವ್ಯವಸ್ಥೆಯನ್ನು ಸುಧಾರಿಸಲು ಆಧುನಿಕ ವಿಧಾನಗಳನ್ನು ಅಳವಡಿಸಿಕೊಳ್ಳಬೇಕೆಂದು ಅವರು ಸೂಚಿಸಿದರು.

ಸಾರ್ವಜನಿಕ ರಜಾ ದಿನಗಳಲ್ಲಿ ವಿಧಾನಸೌಧ ಆವರಣದಲ್ಲಿ ಸುರಕ್ಷತೆಗೆ ಧಕ್ಕೆಯಾಗದಂತೆ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಿ ಸಾರ್ವಜನಿಕರಿಗೆ ಮನರಂಜನೆ ಒದಗಿಸಬೇಕೆಂದು ಸಲಹೆ ನೀಡಿದರು. ಈ ಕಟ್ಟಡದಲ್ಲಿ ***"ಮಳೆನೀರು ಕೊಯ್ಲು"*** ವ್ಯವಸ್ಥೆ ಮಾಡಲು ಸೂಕ್ತ ಪರಿಶೀಲನೆ ನಡೆಸುವಂತೆ ಸಲಹೆ ನೀಡಿದ ಮುಖ್ಯ ಕಾರ್ಯದರ್ಶಿಗಳು ಈ ಕಟ್ಟಡಗಳಲ್ಲಿ ನೀರಿನ ಮಿತಬಳಕೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಇತ್ತೀಚೆಗೆ ಸಾರ್ವಜನಿಕರಿಗೆ ತೆರೆದುಕೊಂಡಿರುವ ಪೂರ್ವ – ಪಶ್ಚಿಮ ಕಾರಿಡಾರ್‌ನಲ್ಲಿರುವ ಅಂಬೇಡ್ಕರ್, ವಿಶ್ವೇಶ್ವರಯ್ಯ ಮತ್ತು ಕಬ್ಬನ್ ಮೆಟ್ರೋ ನಿಲ್ದಾಣದ ಆವರಣದಲ್ಲಿ ರಾಜ್ಯದ ಕಲೆ, ಸಂಸ್ಕೃತಿ, ಜನಜೀವನ ಹಾಗೂ ಸರ್ಕಾರದ ಪ್ರಮುಖ ಜನಪರ ಯೋಜನೆಗಳ ಮಾಹಿತಿಯನ್ನು ಆಕರ್ಷಕವಾಗಿ ಆಧುನಿಕ ದೃಶ್ಯ ಮಾಧ್ಯಮಗಳ ಮೂಲಕ ಪ್ರಚಾರ ಮಾಡಲು ಅಗತ್ಯ ಪ್ರಚಾರ ಯೋಜನೆಯನ್ನು ರೂಪಿಸಬೇಕೆಂದು ಸೂಚಿಸಿದರು.

ಈ ಸಂಬಂಧ ವಿವಿಧ ಇಲಾಖೆಗಳು ಕೈಗೊಂಡಿರುವ ಕ್ರಮಗಳ ಬಗ್ಗೆ ಪುನರ್ ಪರಿಶೀಲಿಸಲು ಮೇ 21 ರಂದು ಮತ್ತೆ ಸಭೆ ಕರೆದು ಚರ್ಚಿಸುವುದಾಗಿ ಮುಖ್ಯ ಕಾರ್ಯದರ್ಶಿಗಳು ತಿಳಿಸಿದರು.

ಎನ್‌ಆರ್‌ವಿ

## ಕರ್ನಾಟಕ ಮಾಧ್ಯಮ ಅಕಾಡೆಮಿ ಪುನರ್ ರಚನೆ

**ಬೆಂಗಳೂರು, ಮೇ 2 (ಕರ್ನಾಟಕ ವಾರ್ತೆ)**

**ಕರ್ನಾಟಕ ಮಾಧ್ಯಮ ಅಕಾಡೆಮಿಗೆ ಸಿದ್ದರಾಜು ಅವರನ್ನು ಅಧ್ಯಕ್ಷರನ್ನಾಗಿ ನಾಮನಿರ್ದೇಶನ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.**

**ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧಿಕಾರೇತರ ಸದಸ್ಯರನ್ನಾಗಿ ರುದ್ರಣ್ಣ ಹರ್ತಿಕೋಟೆ, ಕೆ. ಶಿವಕುಮಾರ್, ಮುತ್ತುನಾಯ್ಕರ್ ಹಾಗೂ ಟಿ.ಎಸ್. ರಂಗಣ್ಣ ಅವರನ್ನು ನಾಮನಿರ್ದೇಶನ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.**

**(ಕರ್ನಾಟಕ ಮಾಧ್ಯಮ ಅಕಾಡೆಮಿ ನಿಯೋಜಿತ ಅಧ್ಯಕ್ಷ ಶ್ರೀ ಸಿದ್ದರಾಜು ಅವರ ಛಾಯಾಚಿತ್ರ ಇದರೊಂದಿಗೆ ಲಗತ್ತಿಸಿದೆ)**

ಬಾಬು:ಜಿಪಿಆರ್.

# ಅವಧಿ ವಿಸ್ತರಣೆ

**ಬೆಂಗಳೂರು, ಮೇ 2 (ಕರ್ನಾಟಕ ವಾರ್ತೆ)**

**ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು 2016–17 ನೇ ಶೈಕ್ಷಣಿಕ ಸಾಲಿನಲ್ಲಿ ದೂರ ಶಿಕ್ಷಣದ ಮೂಲಕ ಕನ್ನಡ ಭಾಷೆಯಲ್ಲಿ ಸಮಗ್ರ ಕೃಷಿ, ಆಹಾರ ಧಾನ್ಯ ಹಣ್ಣು ಮತ್ತು ತರಕಾರಿಗಳ ಕೊಯ್ಲೋತ್ತರ ನಿರ್ವಹಣೆ ಮತ್ತು ಸಾವಯವ ಕೃಷಿ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಅರ್ಜಿಗಳನ್ನು ಸಲ್ಲಿಸುವ ದಿನಾಂಕವನ್ನು ಮೇ 15 ರವರೆಗೆ ರೈತರ ಅನುಕೂಲಕ್ಕಾಗಿ ವಿಸ್ತರಿಸಲಾಗಿದೆ.**

**ಆಸಕ್ತರು, ಅರ್ಜಿಗಳನ್ನು ರೂ 50/– ಸಲ್ಲಿಸಿ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿರುವ ಕೃಷಿ ವಿಜ್ಞಾನ ಕೇಂದ್ರಗಳು ಅಥವಾ ವಿಸ್ತರಣಾ ನಿರ್ದೇಶನಾಲಯ, ಹೆಬ್ಬಾಳ ಬೆಂಗಳೂರು – 560 024 ಇವರಿಂದ ಪಡೆಯಬಹುದು ಅಥವಾ www.uasbangalore.edu.in ವೆಬ್‌ಸೈಟ್‌ನಿಂದ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 080–23418883/080–23410560 ಸಂಪರ್ಕಿಸಬಹುದು.**

ಬಾಬು:ಜಿಪಿಆರ್.